# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2385

ಸದಸ್ಯರ ಹೆಸರು : ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು)

ಉತ್ತರಿಸುವ ದಿನಾಂಕ : 27.03.2026.

ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಬಡ್ತಿ ಕೋಟಾದಡಿ ಖಾಲಿ ಇರುವ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳ ಒಟ್ಟು ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು) | ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 313 ಜಿಪಿಕೆ 2022(2), ದಿನಾಂಕ:29.03.2023 ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಹುದ್ದೆಗಳನ್ನು ರಾಜ್ಯ ವೃಂದವನ್ನಾಗಿ ಆದೇಶಿಸಿರುವುದರಿಂದ ಮುಂಬಡ್ತಿ ಕೋಟಾದಡಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಹುದ್ದೆಗಳನ್ನು ಜಿಲ್ಲಾವಾರು ವಿಂಗಡಿಸಲು ಅವಕಾಶವಿರುವುದಿಲ್ಲ. ರಾಜ್ಯದ ಎಲ್ಲಾ ಜಿಲ್ಲೆಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ ರವರಿಂದ ಪಡೆದ ಮಾಹಿತಿಯಂತೆ ರಾಜ್ಯದಲ್ಲಿ ಬಡ್ತಿ ಕೋಟಾದಡಿ ಖಾಲಿ ಇರುವ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳ ಸಂಖ್ಯೆ: 585. |
| (ಆ) | ಸಾಕಷ್ಟು ಹುದ್ದೆಗಳು ಖಾಲಿ ಇದ್ದರೂ ಗ್ರಾಮ ಪಂಚಾಯತಿ ಕಾರ್ಯದರ್ಶಿ (ಗ್ರೇಡ್-1) ವೃಂದದಿಂದ PDO ಹುದ್ದೆಗೆ ಬಡ್ತಿ ನೀಡದೇ ಇರಲು ಕಾರಣಗಳೇನು; (ವಿವರ ನೀಡುವುದು) | ರಾಜ್ಯದಲ್ಲಿ ಬಡ್ತಿ ಕೋಟಾದಡಿ ಖಾಲಿ ಇರುವ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳನ್ನು ಬಡ್ತಿ ಮೂಲಕ ಭರ್ತಿ ಮಾಡುವ ಸಂಬಂಧ ದಿನಾಂಕ:27.10.2025 ರಂದು ಸ್ಥಳೀಯ ವೃಂದದ ಗ್ರಾಮ ಪಂಚಾಯತಿ ಕಾರ್ಯದರ್ಶಿ (ಗ್ರೇಡ್-1)ಗಳ ಹಾಗೂ ದಿನಾಂಕ:31.12.2025 ರಂದು ರಾಜ್ಯ ಮಟ್ಟದ ಮೂಲ ವೃಂದದ ಗ್ರಾಮ ಪಂಚಾಯತಿ ಕಾರ್ಯದರ್ಶಿ (ಗ್ರೇಡ್-1) ಗಳ ಅಂತಿಮ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಲಾಗಿದ್ದು, ಗ್ರಾಮ ಪಂಚಾಯತಿ ಕಾರ್ಯದರ್ಶಿ (ಗ್ರೇಡ್-1) ರವರುಗಳ 5 ವರ್ಷಗಳ ಕಾರ್ಯನಿರ್ವಹಣಾ ವರದಿ ಹಾಗೂ ಇತರ ದಾಖಲಾತಿಗಳನ್ನು ಪರಿಶೀಲನೆಗೆ ಸಲ್ಲಿಸುವಂತೆ ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ದಿನಾಂಕ:01.01.2026 ರಂದು ಸೂಚಿಸಲಾಗಿದ್ದು, ಅದರನ್ವಯ ದಾಖಲೆಗಳ ಪರಿಶೀಲನಾ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ |
| (ಇ) | ರಾಜ್ಯ ಮಟ್ಟದ ಗ್ರಾಮ ಪಂಚಾಯಿತಿ ಕಾರ್ಯದರ್ಶಿ (ಗ್ರೇಡ್-1) ವೃಂದದ ಅಂತಿಮ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಲಾಗಿದೆಯೇ; | ದಿನಾಂಕ:27.10.2025 ರಂದು ಸ್ಥಳೀಯ ವೃಂದದ ಗ್ರಾಮ ಪಂಚಾಯತಿ ಕಾರ್ಯದರ್ಶಿ (ಗ್ರೇಡ್-1) ಗಳ ಹಾಗೂ ದಿನಾಂಕ:31.12.2025 ರಂದು ರಾಜ್ಯ ಮಟ್ಟದ ಮೂಲ ವೃಂದದ ಗ್ರಾಮ ಪಂಚಾಯತಿ ಕಾರ್ಯದರ್ಶಿ (ಗ್ರೇಡ್-1) ಗಳ ಅಂತಿಮ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಲಾಗಿದೆ. |

| | | |
|---|---|---|
| (ಈ) | ಪ್ರಕಟಿಸಿದ್ದಲ್ಲಿ, ಕಾರ್ಯದರ್ಶಿ (ಗ್ರೇಡ್-1) ಗಳಿಗೆ ಬಡ್ತಿ ನೀಡುವ ಪ್ರಕ್ರಿಯೆಯನ್ನು ತ್ವರಿತಗೊಳಿಸಿ ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು; (ಈ ನಿಟ್ಟಿನಲ್ಲಿ ಈವರೆಗೂ ಆಗಿರುವ ಕ್ರಮಗಳ ಕುರಿತು ಸಂಪೂರ್ಣ ಮಾಹಿತಿ ನೀಡುವುದು) | ದಿನಾಂಕ:27.10.2025 ರಂದು ಸ್ಥಳೀಯ ವೃಂದದ ಗ್ರಾಮ ಪಂಚಾಯತಿ ಕಾರ್ಯದರ್ಶಿ (ಗ್ರೇಡ್-1) ಹಾಗೂ ದಿನಾಂಕ:31.12.2025 ರಂದು ರಾಜ್ಯ ಮಟ್ಟದ ಮೂಲ ವೃಂದದ ಗ್ರಾಮ ಪಂಚಾಯತಿ ಕಾರ್ಯದರ್ಶಿ (ಗ್ರೇಡ್-1)ಗಳ ಅಂತಿಮ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಲಾಗಿದ್ದು, ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-1 ರವರುಗಳ 5 ವರ್ಷಗಳ ಕಾರ್ಯನಿರ್ವಹಣಾ ವರದಿ ಹಾಗು ಇತರ ದಾಖಲಾತಿಗಳನ್ನು ಪರಿಶೀಲನೆಗೆ ಸಲ್ಲಿಸುವಂತೆ ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳಿಗೆ ದಿನಾಂಕ: 01.01.2026 ರಂದು ಸೂಚಿಸಲಾಗಿದ್ದು, ಅದರನ್ವಯ ದಾಖಲೆಗಳ ಪರಿಶೀಲನಾ ಪ್ರಕ್ರಿಯೆ ಪ್ರಗತಿಯಲ್ಲಿದ್ದು, ಪ್ರಕ್ರಿಯೆ ಪೂರ್ಣಗೊಂಡ ನಂತರ, ಮುಂಬಡ್ತಿ ಮೂಲಕ ಹುದ್ದೆಗಳ ಭರ್ತಿಗೆ ಕ್ರಮ ವಹಿಸಲಾಗುವುದು. |
| (ಉ) | ಗ್ರಾಮ ಪಂಚಾಯಿತಿಗಳಲ್ಲಿ ಪ್ರಥಮ ದರ್ಜೆ ಲೆಕ್ಕ ಸಹಾಯಕ ಹುದ್ದೆಗಳನ್ನು ಸೃಜಿಸಿ ದ್ವಿತೀಯ ದರ್ಜೆ ಲೆಕ್ಕ ಸಹಾಯಕ ವೃಂದದಿಂದ ಪದೋನ್ನತಿ ನೀಡುವ ಕುರಿತು ಇದುವರೆಗೂ ಆಗಿರುವ ಕ್ರಮಗಳೇನು? (ವಿವರವಾದ ಮಾಹಿತಿ ನೀಡುವುದು) | ಗ್ರಾಮ ಪಂಚಾಯತಿಗಳಲ್ಲಿ ಪ್ರಥಮ ದರ್ಜೆ ಲೆಕ್ಕ ಸಹಾಯಕ ಹುದ್ದೆಗಳನ್ನು ಸೃಜಿಸುವ ಕುರಿತು ಅಧ್ಯಯನ ನಡೆಸಿ ವರದಿ ನೀಡಲು ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ವಿಶ್ವವಿದ್ಯಾಲಯ, ಗದಗ ರವರಿಗೆ ತಿಳಿಸಿದ್ದು ಅದರಂತೆ ಸದರಿಯವರು ಕಾರ್ಯಾಧ್ಯಯನ ವರದಿಯನ್ನು ಸಲ್ಲಿಸಿದ್ದು, ಪರಿಶೀಲನೆಯಲ್ಲಿರುತ್ತದೆ. |

ಸಂಖ್ಯೆ: ಗ್ರಾಅಪ 339 ಗ್ರಾಪಂಅ 2026

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.